ಅಸಲು ದಾವಾ ಸಂಖ್ಯೆ - 129/2010
ಪಿಡಬ್ಲ್ಯೂ - 01
ದಿನಾಂಕಃ 31-01-2026
ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಹೆಚ್ಚುವರಿ ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಎನ್ ಎಸ್ ಪಿ ವಕೀಲರಿಂದಃ**

ಈ ದಾವೆಯಲ್ಲಿ ನಾನು 3 ನೇ ವಾದಿಯಾಗಿದ್ದು, ಇಂದು ನಾನು ನನ್ನ ಮೌಖಿಕ ಸಾಕ್ಷ್ಯದ ಬದಲು ಈ ಹೆಚ್ಚುವರಿ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಇದರಲ್ಲಿ ಬರೆದ ಎಲ್ಲ ವಿಷಯ ನಿಜ ಮತ್ತು ಸರಿ ಇದ್ದು ನನಗೆ ಗೊತ್ತಿದೆ.

ನಾನು ಈ ಕೆಳಕಂಡ ದಸ್ತಾವೇಜುಗಳನ್ನು ಹಾಜರು ಪಡಿಸಿದ್ದೇನೆ.

ಬೇವಿನಹಳ್ಳಿ ಗ್ರಾಮದ ಸರ್ವೇ ನಂ. 23 ಸಿ ರ 1992-93 ಸಾಲಿನ ಉತಾರವನ್ನು ಹಾಜರುಪಡಿಸಿದ್ದು ಪ್ರತಿವಾದಿ ಪರ ವಕೀಲರ ತಕರಾರಿಗೆ ಒಳಪಟ್ಟು ಅದನ್ನು ನಿಪಿ- 28 ಎಂದು ಗುರುತಿಸಲಾಯಿತು.

ಬೇವಿನಹಳ್ಳಿ ಗ್ರಾಮದ ಸರ್ವೇ ನಂ. 27/4 ರ 1992-93 ಸಾಲಿನ ಉತಾರವನ್ನು ಹಾಜರುಪಡಿಸಿದ್ದು ಪ್ರತಿವಾದಿ ಪರ ವಕೀಲರ ತಕರಾರಿಗೆ ಒಳಪಟ್ಟು ಅದನ್ನು ನಿಪಿ- 29 ಎಂದು ಗುರುತಿಸಲಾಯಿತು.

ಬೇವಿನಹಳ್ಳಿ ಗ್ರಾಮದ ಎಂ ಇ ನಂ. 998 ಮತ್ತು 1260 ನ್ನು ಹಾಜರುಪಡಿಸಿದ್ದು ಪ್ರತಿವಾದಿ ಪರ ವಕೀಲರ ತಕರಾರಿಗೆ ಒಳಪಟ್ಟು ಅವುಗಳನ್ನು ಕ್ರಮವಾಗಿ ನಿಪಿ- 30 ಮತ್ತು 31 ಎಂದು ಗುರುತಿಸಲಾಯಿತು.

ದಿಃ 13-01-2026 ರಂದು ತಹಶೀಲ್ದಾರ ಕಚೇರಿ ರವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 32 ಎಂದು ಗುರುತಿಸಲಾಯಿತು.

ಉಪವಿಭಾಗಾಧಿಕಾರಿಗಳು ಸವಣೂರ ರವರಿಗೆ ಸಲ್ಲಿಸಿದ ಅರ್ಜಿಯ ಸ್ವೀಕೃತಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 33 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯಲ್ಲಿ ಕೋರಿಕೊಂಡಂತೆ ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ, ನೀಡಲಾಯಿತು.**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಸವಣೂರು